ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯ ಪರಿಹಾರ

216 (484) ಶ್ರೀ ರಮಾನಾಥ್ ರೈ. ಬಿ. (ಬಂಟ್ವಾಳ) : ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಮತ್ತು ಸಾರ್ವಜನಿಕ ಉದ್ಯಮಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ವಿಧಾನ ಸಭಾ ಕ್ಷೇತ್ರದ ಬಂಟ್ವಾಳ ಪುರಸಭಾ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆಗಳಿರುವುದು ಸರ್ಕಾರದ ಗಮನದಲ್ಲಿದೆಯೇ;

ಆ) ಇದ್ದಲ್ಲಿ, ಇದನ್ನು ಪರಿಹಾರ ಮಾಡುವ 2ನೇ ಹಂತದ ಕುಡಿಯುವ ನೀರಿನ ಯೋಜನೆ ಯಾವ ಹಂತದಲ್ಲಿದೆ;

ಇ) ಶೀಘ್ರವೇ ಪರಿಹಾರ ನೀಡುವ ಯೋಜನೆ ಸರ್ಕಾರದ ಮುಂದಿದೆಯೇ?

ಶ್ರೀ ಬಾಲಚಂದ್ರ ಜಾರಕಿ ಹೊಳಿ (ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಮತ್ತು ಸಾರ್ವಜನಿಕ ಉದ್ಯಮಗಳ ಸಚಿವರು) :

ಅ) ಬೇಸಿಗೆಯ ನಾಲ್ಕು ತಿಂಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವುದು ಗಮನಕ್ಕೆ ಬಂದಿರುತ್ತದೆ.

ಆ) ಪ್ರಾಥಮಿಕ ಪ್ರಸ್ತಾವನೆಯ ಯೋಜನಾ ವರದಿಯನ್ನು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವತಿಯಿಂದ ತಯಾರಿಸಲಾಗಿದೆ.

ಇ) ಬಂಟ್ವಾಳ ಪಟ್ಟಣಕ್ಕೆ ಹಾಲಿ ಇರುವ ವಿತರಣಾ ವ್ಯವಸ್ಥೆಯನ್ನು ಅಭಿವೃದ್ಧಿ ಪಡಿಸಲು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವತಿಯಿಂದ ಯೋಜನೆಯನ್ನು ತಯಾರಿಸಿರಿ ಸಲಾಗಿದ್ದು, ಪೈಪ್‌ಲೈನ್‌ಗಳನ್ನು ಪುನರ್ ಮಾದರಿಗೊಳಿಸಲಾಗಿದ್ದು, ಯೋಜನಾ ವರದಿಯನ್ನು ತಯಾರಿಸಲು ಮೇ: ಏರ್‌ಕಾನ್ ಕನ್ಸಲ್‌ಟಂಟ್ಸ್, ಹುಬ್ಬಳ್ಳಿ ಇವರಿಗೆ ವಹಿಸಿಕೊಡಲಾಗಿರುತ್ತದೆ.

ಕುಣಿಗಲ್ ಪುರಸಭೆಯ ಕಾಮಗಾರಿಗಳಲ್ಲಿ ಅವ್ಯವಹಾರ

217 (54) ಶ್ರೀ ರಾಮಸ್ವಾಮಿಗೌಡ ಬಿ.ಬಿ. (ಕುಣಿಗಲ್) : ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಮತ್ತು ಸಾರ್ವಜನಿಕ ಉದ್ಯಮಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?